# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1250 |
| ಸದಸ್ಯರ ಹೆಸರು | : | ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವವರು | : | ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕ ಸಬಲೀಕರಣ ಸಚಿವರು. |
| ಉತ್ತರಿಸಬೇಕಾದ ದಿನಾಂಕ | : | 13.03.2026. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಯಾದಗಿರಿ ಜಿಲ್ಲೆಯ ಪ್ರತಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ವಾರ್ಷಿಕ ಸರಾಸರಿ 25 ರಿಂದ 30 ಬಾಲ್ಯವಿವಾಹ ಹಾಗೂ ಪೋಕ್ಸೋ ಪ್ರಕರಣಗಳು ದಾಖಲಾಗುತ್ತಿರುವ ಆತಂಕಕಾರಿ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ.<br>1. 2025 ರ ಕ್ಯಾಲೆಂಡರ್ ವರ್ಷದಲ್ಲಿ ಯಾದಗಿರಿ ಜಿಲ್ಲೆಯಲ್ಲಿ 14 ಬಾಲ್ಯವಿವಾಹ ನಡೆದಿರುತ್ತದೆ. ಪ್ರತಿ ಮಾಹೆಯಲ್ಲಿ ಸರಾಸರಿ 1.68% ರಷ್ಟು ಬಾಲ್ಯವಿವಾಹ ಪ್ರಕರಣ ನಡೆದಿರುತ್ತದೆ.<br>2. 2025 ರ ಕ್ಯಾಲೆಂಡರ್ ವರ್ಷದಲ್ಲಿ ಯಾದಗಿರಿ ಜಿಲ್ಲೆಯಲ್ಲಿ 104 ಪೋಕ್ಸೋ ಪ್ರಕರಣಗಳು ದಾಖಲಾಗಿರುತ್ತದೆ. ಪ್ರತಿ ಮಾಹೆಯಲ್ಲಿ ಸರಾಸರಿ 12.48% ರಷ್ಟು ಪೋಕ್ಸೋ ಪ್ರಕರಣ ದಾಖಲಾಗಿದೆ. |
| ಆ) | ಬಂದಿದ್ದಲ್ಲಿ, ಸಾಮಾಜಿಕ ಪಿಡುಗಿನಂತಾಗಿರುವ ಈ ಅಪರಾಧಗಳನ್ನು ತಡೆಯುವಲ್ಲಿ ಜಿಲ್ಲಾಡಳಿತ ವಿಫಲವಾಗಿದೆಯೇ; (ವಿವರ ನೀಡುವುದು); | **ಸಾಮಾಜಿಕ ಪಿಡುಗಿನಂತಾಗಿರುವ ಈ ಅಪರಾಧಗಳನ್ನು ತಡೆಯುವಲ್ಲಿ ಜಿಲ್ಲಾಡಳಿತ ಕೈಗೊಂಡಿರುವ ಕ್ರಮಗಳು:**<br>1. ಯಾದಗಿರಿ ಜಿಲ್ಲೆಯಲ್ಲಿ 122 ಗ್ರಾಮ ಪಂಚಾಯತಿಗಳಲ್ಲಿ ಮಕ್ಕಳ ಹಕ್ಕುಗಳ ವಿಶೇಷ ಗ್ರಾಮ ಸಭೆ ಹಮ್ಮಿಕೊಂಡು ಮಕ್ಕಳಿಗೆ, ಶಿಕ್ಷಕರಿಗೆ ಅಂಗನವಾಡಿ ಮತ್ತು ಆಶಾ ಕಾರ್ಯಕರ್ತೆಯರಿಗೆ ಬಾಲ್ಯವಿವಾಹ ನಿಷೇಧ ಕಾಯ್ದೆ-2006, ಮತ್ತು ಪೋಕ್ಸೋ ಕಾಯ್ದೆ-2012ರ ಕುರಿತು ಅರಿವು/ ಜಾಗೃತಿ ಮೂಡಿಸಲಾಗಿದೆ.<br>2. ಯಾದಗಿರಿ ಜಿಲ್ಲೆಯಲ್ಲಿ 32 ವಸತಿ ಶಾಲೆಗಳಿದ್ದು, ಪ್ರತಿ ವಸತಿ ಶಾಲೆಯ ಮಕ್ಕಳಿಗೆ ಮತ್ತು ಶಿಕ್ಷಕರಿಗೆ, ವಸತಿ ನಿಲಯದ ಮೇಲ್ವಿಚಾರಕರು/ ವಾರ್ಡನ್ ಇವರಿಗೆ ಬಾಲ್ಯವಿವಾಹ ನಿಷೇಧ ಕಾಯ್ದೆ-2006, ಮತ್ತು ಪೋಕ್ಸೋ ಕಾಯ್ದೆ-2012ರ ಕುರಿತು ಅರಿವು/ ಜಾಗೃತಿ ಮೂಡಿಸಲಾಗಿದೆ.<br>3. ಸಾಮಾಜಿಕ ಪಿಡುಗಿನಂತಾಗಿರುವ ಈ ಅಪರಾಧಗಳನ್ನು ತಡೆಯುವಲ್ಲಿ ಜಿಲ್ಲಾಡಳಿತ ವತಿಯಿಂದ ಎಲ್ಲಾ ಭಾಗೀದಾರ ಅಧಿಕಾರಿ/ ಸಿಬ್ಬಂದಿಗಳಿಗೆ ಬಾಲ್ಯವಿವಾಹ, ಪೋಕ್ಸೋ, ಪ್ರಕರಣಗಳ ಕುರಿತು ಅರಿವು ಮತ್ತು ಜಾಗೃತಿ ಮೂಡಿಸುವ ಕುರಿತು ತರಬೇತಿ ನೀಡಲಾಗುತ್ತಿದೆ. |

| | | |
|---|---|---|
| | | 4. ಮಕ್ಕಳ ರಕ್ಷಣಾ ನಿರ್ದೇಶನಾಲಯದಿಂದ ಕ್ರಿಯಾ ಯೋಜನೆಯನ್ನು ರೂಪಿಸಿ, ಜಿಲ್ಲಾಧಿಕಾರಿಗಳ ಮೂಲಕ ಜಿಲ್ಲಾ ಮಟ್ಟದಲ್ಲಿ ಎಲ್ಲಾ ಸಂಬಂಧಪಟ್ಟ ಬಾಲ್ಯವಿವಾಹ ನಿಷೇಧಾಧಿಕಾರಿಗಳು ಮತ್ತು ಇತರ ಭಾಗೀದಾರ ಇಲಾಖಾ ಅಧಿಕಾರಿ/ ಸಿಬ್ಬಂದಿಗಳಿಗೆ ಸಾಮರ್ಥ್ಯಾಭಿವೃದ್ಧಿ ತರಬೇತಿ ಆಯೋಜಿಸಲು ಕ್ರಮವಹಿಸಲಾಗಿದೆ.<br>5. ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮಕ್ಕಳ ರಕ್ಷಣಾ ಸಮಿತಿ ರಚಿಸಲಾಗಿದ್ದು, ಈ ಪ್ರಕರಣಗಳ ಕುರಿತು ಪ್ರತಿ ತ್ರೈಮಾಸಿಕದಲ್ಲಿ ಪರಿಶೀಲನೆಯನ್ನು ನಡೆಸಲಾಗುತ್ತಿದೆ.<br>6. ಜಿಲ್ಲಾಧಿಕಾರಿಗಳ ಮಾರ್ಗದರ್ಶನದಲ್ಲಿ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಶಾಲೆಗಳು, ವಿವಿಧ ಇಲಾಖೆಗಳು ಮತ್ತು ಸಾರ್ವಜನಿಕರಿಗೆ ಹೆಚ್ಚಿನ ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.<br>7. ಪಾಲನೆ/ ಪೋಷಣೆ ಅವಶ್ಯಕತೆ ಇರುವ ಮಕ್ಕಳ ಸುರಕ್ಷತೆ ಮತ್ತು ಪುನರ್ವಸತಿಗಾಗಿ ಪ್ರತಿ ಜಿಲ್ಲೆಯಲ್ಲೂ ಮಕ್ಕಳ ಕಲ್ಯಾಣ ಸಮಿತಿ, ಮಕ್ಕಳ ವಿಶೇಷ ಪೊಲೀಸ್ ಘಟಕ, ಮಕ್ಕಳ ಪಾಲನಾ ಸಂಸ್ಥೆ ಮತ್ತು ಜಿಲ್ಲಾ ಮಕ್ಕಳ ರಕ್ಷಣಾ ಘಟಕಗಳು ಕಾರ್ಯನಿರ್ವಹಿಸುತ್ತಿವೆ. ಸದರಿ ಘಟಕಗಳ ಕಾರ್ಯವೈಖರಿಗಳನ್ನು ಪ್ರತಿ ದಿನ ಜಿಲ್ಲಾಧಿಕಾರಿಗಳು ಉಸ್ತುವಾರಿ ವಹಿಸುತ್ತಿದ್ದಾರೆ. |
| ಇ) | ಇಂತಹ ಅಪರಾಧಗಳನ್ನು ತಡೆಯಲು ಹಾಗೂ ಈ ಬಗ್ಗೆ ಜಾಗೃತಿ ಮೂಡಿಸಲು ಮತ್ತು ಮಕ್ಕಳ ರಕ್ಷಣೆಗಾಗಿ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ? (ವಿವರ ನೀಡುವುದು); | **ಅಪರಾಧಗಳನ್ನು ತಡೆಯಲು ಮಕ್ಕಳ ರಕ್ಷಣೆಗಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳು:**<br>1. ಬಾಲ್ಯವಿವಾಹದ ಪ್ರಯತ್ನ, ನಿಶ್ಚಿತಾರ್ಥದ ಬಗ್ಗೆ ಕ್ರಮ ಕೈಗೊಳ್ಳಲು ಬಾಲ್ಯವಿವಾಹ ನಿಷೇಧ ಕಾಯ್ದೆ-2006 ರಲ್ಲಿ ಯಾವುದೇ ಕಲಂಗಳಲ್ಲಿ ಅವಕಾಶ ಇಲ್ಲದೇ ದೂರನ್ನು ದಾಖಲಿಸಲು ಸಾಧ್ಯವಾಗುತ್ತಿಲ್ಲವಾದ್ದರಿಂದ ಇದನ್ನು ಅಪರಾಧವನ್ನಾಗಿಸಲು ಬಾಲ್ಯವಿವಾಹ ನಿಷೇಧ (ಕರ್ನಾಟಕ ತಿದ್ದುಪಡಿ -2025) ಅನ್ನು ಜಾರಿಗೆ ತರಲು ಕ್ರಮವಹಿಸಲಾಗುತ್ತಿದೆ.<br>**2.** ರಾಜ್ಯದಲ್ಲಿ ಅಪ್ರಾಪ್ತ ವಯಸ್ಸಿನ ಬಾಲಕಿಯರು ಬಾಲಗರ್ಭಿಣಿಯರು ಆಗುವುದನ್ನು ತಡೆಗಟ್ಟಲು ಎಲ್ಲಾ ಭಾಗೀದಾರ ಇಲಾಖೆಗಳ ಅಧಿಕಾರಿ/ ಸಿಬ್ಬಂದಿಗಳಿಗೆ ಎಲ್ಲಾ ಜಿಲ್ಲಾ ಮತ್ತು ತಾಲ್ಲೂಕು ಹಂತಗಳಲ್ಲಿ ಸಾಮರ್ಥ್ಯಾಭಿವೃದ್ಧಿ ತರಬೇತಿ ನೀಡಲು ಯೋಜಿಸಲಾಗುತ್ತಿದೆ.<br>3. ಮಕ್ಕಳ ಸಹಾಯವಾಣಿ-1098 (24*7) ಕಾರ್ಯನಿರ್ವಹಿಸುತ್ತಿದೆ. ಸಂಕಷ್ಟದಲ್ಲಿರುವ ಮಗುವಿನ ಬಗ್ಗೆ, ಯಾವುದೇ ಸಮಯದಲ್ಲಿ ಕರೆ ಸ್ವೀಕೃತವಾದರೂ ತಕ್ಷಣ ಮಗುವನ್ನು ರಕ್ಷಿಸಲು ಸಂಬಂಧಿಸಿದ ಅಧಿಕಾರಿಗಳು ಕಾರ್ಯ ಪ್ರವೃತ್ತರಾಗಿರುತ್ತಾರೆ. |

| | | |
|---|---|---|
| | | 4. ದಿನಾಂಕ:06.09.2024ರ ಆದೇಶದಂತೆ ಅಪ್ರಾಪ್ತ ವಯಸ್ಸಿನ ಹೆಣ್ಣು ಮಕ್ಕಳು ಬಾಲಗರ್ಭಿಣಿಯರಾಗುವುದನ್ನು ಪರಿಣಾಮಕಾರಿಯಾಗಿ ತಡೆಗಟ್ಟಲು ವಿವಿಧ ಇಲಾಖೆಗಳಿಗೆ ಜವಾಬ್ದಾರಿಗಳನ್ನು ನಿಗದಿಪಡಿಸಲಾಗಿದೆ.<br>5. ಗ್ರಾಮ ಪಂಚಾಯತಿ ಮಟ್ಟದಲ್ಲಿ ಮಹಿಳೆಯರು ಮತ್ತು ಮಕ್ಕಳ ಸುರಕ್ಷತೆಗಾಗಿ ಮಹಿಳೆಯರ ಮತ್ತು ಮಕ್ಕಳ ಹಕ್ಕುಗಳ ಕಾವಲು ಸಮಿತಿಯನ್ನು ರಚಿಸಲಾಗಿದೆ.<br>6. ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮಕ್ಕಳ ರಕ್ಷಣಾ ಸಮಿತಿ ರಚಿಸಲಾಗಿದ್ದು, ಈ ಪ್ರಕರಣಗಳ ಕುರಿತು ಪ್ರತಿ ತ್ರೈಮಾಸಿಕದಲ್ಲಿ ಪರಿಶೀಲನೆ ಮಾಡಲಾಗುತ್ತಿದೆ.<br>7. ಪಾಲನೆ/ ಪೋಷಣೆ ಅವಶ್ಯಕತೆ ಇರುವ ಮಕ್ಕಳ ಸುರಕ್ಷತೆ ಮತ್ತು ಪುನರ್ವಸತಿಗಾಗಿ ಪ್ರತಿ ಜಿಲ್ಲೆಯಲ್ಲೂ ಮಕ್ಕಳ ಕಲ್ಯಾಣ ಸಮಿತಿ, ಮಕ್ಕಳ ವಿಶೇಷ ಪೊಲೀಸ್ ಘಟಕ, ಮಕ್ಕಳ ಪಾಲನಾ ಸಂಸ್ಥೆ ಮತ್ತು ಜಿಲ್ಲಾ ಮಕ್ಕಳ ರಕ್ಷಣಾ ಘಟಕಗಳು ಕಾರ್ಯನಿರ್ವಹಿಸುತ್ತಿವೆ.<br>8. ರಾಷ್ಟ್ರೀಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ (NCPCR) ವತಿಯಿಂದ ಕ್ರಮಬದ್ಧ ಕಾರ್ಯ ವಿಧಾನ(SOP) ರಚನೆಯಾಗಿದ್ದು, ಭಾಗೀದಾರ ಇಲಾಖೆಗಳಿಗೆ ಸದರಿ ಕಾರ್ಯವಿಧಾನದಂತೆ ಕಾರ್ಯನಿರ್ವಹಿಸಲು ಈಗಾಗಲೇ ತಿಳಿಸಲಾಗಿದೆ.<br>9. ಸಂತ್ರಸ್ಥೆಗೆ ಆರೋಗ್ಯ ಸೇವೆ ಮತ್ತು ವೈದ್ಯಕೀಯ ತಪಾಸಣೆಗೆ ಒಂದು ಬಾರಿಗೆ ರೂ.6,000/-ಹಾಗೂ ಶಿಕ್ಷಣ ಮುಂದುವರೆಸಲು ಇಚ್ಛಿಸಿದಲ್ಲಿ ಪ್ರಾಯೋಜಕತ್ವ ಯೋಜನೆಯಡಿ ಪ್ರತಿ ತಿಂಗಳಿಗೆ ರೂ.4,000/-ಗಳಂತೆ 18 ವರ್ಷ ಪೂರ್ಣಗೊಳ್ಳುವವರೆಗೂ ಆರ್ಥಿಕ ಸೌಲಭ್ಯ ಒದಗಿಸಲಾಗುವುದು.<br>10. Pradhan Mantri Jan Arogya Yojana (PM-JAY) ಅಡಿಯಲ್ಲಿ ವರ್ಷಕ್ಕೆ ರೂ.5.00 ಲಕ್ಷಗಳ ಆರೋಗ್ಯ ವಿಮೆಯನ್ನು ಸಂತ್ರಸ್ಥೆಗೆ ಮತ್ತು ಅವಳ ನವಜಾತ ಶಿಶುವಿಗೆ ನೀಡಲಾಗುವುದು.<br>11. ಬಾಲ್ಯವಿವಾಹ ಪ್ರಕರಣಗಳನ್ನು ತಡೆಯುವ ನಿಟ್ಟಿನಲ್ಲಿ ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಹಾಗೂ ತಾಲ್ಲೂಕು ಮಟ್ಟದಲ್ಲಿ ಆಯಾ ತಾಲ್ಲೂಕು ತಹಶೀಲ್ದಾರ್‌ರವರನ್ನು ಸಮನ್ವಯ ಹಾಗೂ ಪರಿಶೀಲನಾ ಸಮಿತಿ ಅಧ್ಯಕ್ಷರನ್ನಾಗಿ ಸರ್ಕಾರವು ನೇಮಿಸಲಾಗಿದೆ.<br>12. ಬಾಲಗರ್ಭಿಣಿ ಪ್ರಕರಣಗಳು ಕಂಡುಬಂದಲ್ಲಿ ನಿಯಮಾನುಸಾರ FIR ದಾಖಲಿಸಿ ಕ್ರಮವಹಿಸಲಾಗುತ್ತಿದೆ. |

| | | |
|---|---|---|
| | | 13. ಮಕ್ಕಳ ರಕ್ಷಣಾ ನೀತಿ -2023 ಕುರಿತು ಎಲ್ಲಾ ಶಾಲಾ-ಕಾಲೇಜುಗಳಲ್ಲಿ ಅರಿವು ಮೂಡಿಸಲಾಗಿದೆ. ಮಕ್ಕಳ ರಕ್ಷಣಾ ಸಮಿತಿಗಳನ್ನು ಪ್ರತಿ ಶಾಲೆಗಳಲ್ಲಿಯೂ ರಚಿಸಲು ಕ್ರಮವಹಿಸಲಾಗಿದೆ.<br>14. ಮಕ್ಕಳ ಪಾಲನಾ ಕೇಂದ್ರಗಳಲ್ಲಿ ದಾಖಲಾಗುವ ಬಾಲಗರ್ಭಿಣಿ/ ಬಾಲತಾಯಿ ಮತ್ತು ನವಜಾತ ಶಿಶುವಿಗೆ ಸಂಬಂಧಿಸಿದಂತೆ ಪಾಲಿಸಬೇಕಾದ ಕ್ರಮಬದ್ಧ ಕಾರ್ಯವಿಧಾನ (SOP) ವನ್ನು ದಿನಾಂಕ:02.09.2025 ರಂದು ಹೊರಡಿಸಲಾಗಿದೆ.<br>15. ರಾಜ್ಯದ ಎಲ್ಲಾ ಶಾಲಾ-ಕಾಲೇಜು, ವಸತಿ ನಿಲಯ ಹಾಗೂ ತರಬೇತಿ ಸಂಸ್ಥೆಗಳಲ್ಲಿ ಮಕ್ಕಳ ಹಕ್ಕುಗಳು ಬಾಲಗರ್ಭಿಣಿ, ಪೋಕ್ಸೋ, ಬಾಲ್ಯವಿವಾಹ ಹಾಗೂ ಮಕ್ಕಳ ಸಹಾಯವಾಣಿ-1098 ಮಕ್ಕಳಿಗೆ ಅರಿವು ಜಾಗೃತಿ ಮೂಡಿಸುವ ಕುರಿತು ವಿವಿಧ ಇಲಾಖೆಗಳು ನಿಗಾವಹಿಸಬೇಕಾದ ಆದ್ಯತೆಯ ಅಂಶಗಳ ಕುರಿತು 07 ಇಲಾಖೆಗಳಿಂದ ದಿನಾಂಕ:13.10.2025 ರಂದು ಜಂಟಿ ಸುತ್ತೋಲೆಯನ್ನು ಹೊರಡಿಸಲಾಗಿದೆ. ಪ್ರತಿಯನ್ನು **ಅನುಬಂಧದಲ್ಲಿ** ಒದಗಿಸಲಾಗಿದೆ.<br><br>**ಪ್ರಕರಣಗಳನ್ನು ನಿಯಂತ್ರಿಸಲು ಈ ಕೆಳಕಂಡಂತೆ ಕಾಯ್ದೆ ಮತ್ತು ನಿಯಮಗಳನ್ನು ರೂಪಿಸಲಾಗಿದೆ.**<br><br>○ ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ) ಕಾಯ್ದೆ-2015<br>○ ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ) ತಿದ್ದುಪಡಿ ಕಾಯ್ದೆ 2021, 2016ರ ಮಾದರಿ ನಿಯಮಗಳು.<br>○ ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ ತಡೆ (ಪೋಕ್ಸೋ) ಕಾಯ್ದೆ-2012 ನಿಯಮಗಳು-2020.<br>○ ಬಾಲ್ಯವಿವಾಹ ನಿಷೇಧ ಕಾಯ್ದೆ-2006,<br>○ ಬಾಲ್ಯವಿವಾಹ ನಿಷೇಧ (ಕರ್ನಾಟಕ) ನಿಯಮಗಳು- 2014.<br>○ ಬಾಲ್ಯವಿವಾಹ ನಿಷೇಧ (ಕರ್ನಾಟಕ ತಿದ್ದುಪಡಿ) ಕಾಯ್ದೆ-2016<br>○ ಬಾಲ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ-1986<br>○ ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ (ತಡೆಗಟ್ಟುವಿಕೆ) ಕಾಯ್ದೆ-1956 |

ಮಮಇ 59 ಮಭಾಬ 2026

**(ಲಕ್ಷ್ಮೀ ಆರ್. ಹೆಬ್ಬಾಳ್ಕರ್)**

ಮಹಿಳಾ ಮತ್ತುಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಹಾಗೂ ಹಿರಿಯ ನಾಗರೀಕರ
ಸಬಲೀಕರಣ ಸಚಿವರು.